ಪರ್ಯಾಲೋಚನಾ ಪ್ರಸ್ತಾವ

(ಆ) ಕರ್ನಾಟಕ ಧನ ವಿನಿಯೋಗ (ಸಂಖ್ಯೆ 4) ವಿಧೇಯಕ 2011

ಪರ್ಯಾಲೋಚನಾ ಪ್ರಸ್ತಾವ

ಬಿ.ಎಸ್. ಯಡಿಯೂರಪ್ಪ(ಮಾನ್ಯ ಮುಖ್ಯ ಮಂತ್ರಿಗಳು):- ಮಾನ್ಯ ಅಧ್ಯಕ್ಷರೆ, 2011ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು:- ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಸಭೆ ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದಿದೆ.

ಪ್ರಸ್ತಾವದ ಪರವಾಗಿರುವವರು ಹೌದು ಎಂದು ಸೂಚಿಸಬೇಕು.
ಪ್ರಸ್ತಾವದ ವಿರೋಧವಾಗಿರುವವರು ಇಲ್ಲವೆಂದು ಸೂಚಿಸಬೇಕು.
ಪ್ರಸ್ತಾವ ಹೌದು ಎನ್ನುವವರು ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವ ಹೌದು ಎನ್ನುವವರು ಪರವಾಗಿದೆ.
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.

ಅಧ್ಯಕ್ಷರು:- ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3ರವರೆಗೆ

ಅಧ್ಯಕ್ಷರು:- 2 ರಿಂದ 3ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ವಿರೋಧವಾಗಿರುವವರು ಇಲ್ಲವೆಂದು ಸೂಚಿಸಬೇಕು.
ಪ್ರಸ್ತಾವದ ಪರವಾಗಿರುವವರು ಹೌದು ಎಂದು ಸೂಚಿಸಬೇಕು.
ಪ್ರಸ್ತಾವ ಹೌದು ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವ ಹೌದು ಎನ್ನುವವರ ಪರವಾಗಿದೆ.
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ.

ಅಧ್ಯಕ್ಷರು:- "ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತವೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿರುತ್ತವೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ:– 2011–12ನೇ ಸಾಲಿನ ಕರ್ನಾಟಕ ಧನ ವಿನಿಯೋಗ ಸಂಖ್ಯೆ.4ರ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ, "2011–12ನೇ ಸಾಲಿನ ಕರ್ನಾಟಕ ಧನ ವಿನಿಯೋಗ ಸಂಖ್ಯೆ.4ರ ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವದ ಪರವಾಗಿರುವವರು ಹೌದು ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು.

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ.

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ. ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.

(5) ಗಮನ ಸೆಳೆಯುವ ಸೂಚನೆಗಳು

1. ಬಿಪಿಎಲ್ ಕಾರ್ಡುದಾರರಿಗೆ ವಾರ್ಷಿಕ ಆದಾಯ ಮಿತಿಯನ್ನು ಹೆಚ್ಚಿಸುವ ಬಗ್ಗೆ.

ಶ್ರೀ ಹೆಚ್. ಹಾಲಪ್ಪ (ಸೊರಬ):– ಮಾನ್ಯ ಅಧ್ಯಕ್ಷರೆ, ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿರುವ ಬಡ ವಿದ್ಯಾರ್ಥಿಗಳಿಗೆ ಶುಲ್ಕ ರಿಯಾಯಿತಿಗಾಗಿ ಬಿ.ಪಿ.ಎಲ್., ಕಾರ್ಡ್ ಹೊಂದಿದ್ದು, ಈಗ ಏನು ವಾರ್ಷಿಕ ಆದಾಯದ ಮಿತಿ ರೂ.11.000–00 ಇದೆ, ಆ ವಾರ್ಷಿಕ ಆದಾಯದ ಮಿತಿಯನ್ನು ಹೆಚ್ಚಿಸುವ ಪ್ರಸ್ತಾವವನ್ನು ಸರ್ಕಾರವು ಕಾರ್ಯಗತಗೊಳಿಸದೇ ಬಡ ವಿದ್ಯಾರ್ಥಿಗಳಿಗೆ